ಬೀದರ್ ಜಿಲ್ಲೆಯಲ್ಲಿ ವಿದ್ಯುತ್ ಕೊರತೆ

116 (297) ಶ್ರೀ ಬಸವರಾಜ ಪಾಟೀಲ್ ಅಟ್ಟೂರು (ಬಸವಕಲ್ಯಾಣ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಬಸವಕಲ್ಯಾಣ ಮತಕ್ಷೇತ್ರದಲ್ಲಿ ತೀವ್ರವಾದ ವಿದ್ಯುತ್ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಜಿಲ್ಲೆಗೆ ಪ್ರತಿ ದಿನ ಅಗತ್ಯವಿರುವ ವಿದ್ಯುತ್ತಿನ ಪ್ರಮಾಣವೆಷ್ಟು ಮತ್ತು ಈಗ ಪ್ರತಿ ದಿನ ಸರಬರಾಜು ಮಾಡುತ್ತಿರುವ ವಿದ್ಯುತ್ತಿನ ಪ್ರಮಾಣವೆಷ್ಟು? ಕೊರತೆ ಇರುವ ವಿದ್ಯುತ್ತಿನ ಪ್ರಮಾಣವೆಷ್ಟು?

ಇ) ಜಿಲ್ಲೆಯಲ್ಲಿ ನಿಯಮಿತವಾಗಿ ವಿದ್ಯುತ್ ಸರಬರಾಜಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಈ) ಒಂದು ವೇಳೆ ಖಾಸಗಿ ಉದ್ಯಮಿಗಳು ಬೀದರ್ ಜಿಲ್ಲೆಯಲ್ಲಿ ಶಾಖೋತ್ಪನ್ನ ವಿದ್ಯುತ್ ಘಟಕವನ್ನು ಸ್ಥಾಪಿಸಲು ಮುಂದೆ ಬಂದಲ್ಲಿ ಸರ್ಕಾರ ಅನುಮತಿಯನ್ನು ನೀಡುವುದೇ?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಹೌದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಬೀದರ್ ಜಿಲ್ಲೆಗೆ ಅಗತ್ಯವಿರುವ ವಿದ್ಯುತ್ ಪ್ರಮಾಣ 140 ಮೆಗಾವ್ಯಾಟ್. ಈಗ ಪ್ರತಿ ದಿನ ಸರಬರಾಜು ಮಾಡುತ್ತಿರುವ ವಿದ್ಯುತ್ ಪ್ರಮಾಣ 80–120 ಮೆಗಾವ್ಯಾಟ್ ಮತ್ತು ಕೊರತೆ ಇರುವ ವಿದ್ಯುತ್ ಪ್ರಮಾಣ 20 ಮೆಗಾವ್ಯಾಟ್.

ಇ) ಬೀದರ್ ಜಿಲ್ಲೆಗೆ ಈಗಾಗಲೇ ನಿಗದಿತ ವೇಳೆಯಲ್ಲಿ ನಿಯಮಿತವಾಗಿ ವಿದ್ಯುತ್ತನ್ನು ಪೂರೈಸಲಾಗುತ್ತಿದೆ ಮತ್ತು ಸಮರ್ಪಕ ವಿದ್ಯುತ್ ಸರಬರಾಜು ಮಾಡಲು ನಿರಂತರ ಜ್ಯೋತಿ ಯೋಜನೆಯನ್ನು ಅನುಷ್ಠಾನ ಗೊಳಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ.

ಈ) ಪರಿಶೀಲಿಸಲಾಗುವುದು.